ದಿಃ **09-07-2024** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಾದಿ ಪರ ವಕೀಲರವರಿಂದ:

ನಾನು ಈ ದಾವೆಯಲ್ಲಿ ವಾದಿ ಬ್ಯಾಂಕಿನ ವ್ಯವಸ್ಥಾಪಕನಾಗಿದ್ದು ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರ ಸಲ್ಲಿಸಿರುತ್ತೇನೆ. ಪ್ರಮಾಣ ಪತ್ರದಲ್ಲಿ ಬರೆದಿರುವ ಸಂಗತಿಗಳು ನಿಜ ಇವೆ. ನಂತರ ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಪ್ರತಿವಾದಿಯರು ಬರೆದುಕೊಟ್ಟ ಸಾಲದ ಕರಾರು ಪತ್ರ ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-1 ಎಂದು, ಪ್ರತಿವಾದಿಯರು ಬರೆದುಕೊಟ್ಟ ಗ್ಯಾರಂಟಿ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-2 ಎಂದು, ಪ್ರತಿವಾದಿಯರು ತಮ್ಮ ಖಾತೆಗೆ ಹಣ ಸಂದಾಯವಾಗಿರುತ್ತದೆ ಎಂದು ಬರೆದುಕೊಟ್ಟ ಎರಡು ಸ್ವೀಕೃತಿ ಪತ್ರಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ಕ್ರಮವಾಗಿ ನಿಪಿ-3 ಮತ್ತು ನಿಪಿ-4 ಎಂದು, ಪ್ರತಿವಾದಿಯರು ಬರೆದುಕೊಟ್ಟ ಸಮ್ಮತಿ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-5 ಎಂದು, ಪ್ರತಿವಾದಿಯರು ಬರೆದುಕೊಟ್ಟ ಸಾಲದ ಪುನಶ್ಚೇತನ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-6 ಎಂದು, ಪ್ರತಿವಾದಿಯರಿಗೆ ದಿಃ 08-09-2023 ರಂದು ಕಳುಹಿಸಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-7 ಎಂದು, ಪ್ರತಿವಾದಿ 1 ರವರ ಲೇಡ್ಜರ ಅಕೌಂಟ ಸ್ಟೇಟಮೆಂಟ ಇದರ ದೃಡೀಕೃತನ ನಕಲನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿಯರು ಏಕತರ್ಫಿ ಇರುವುದರಿಂದ ಪಾಟೀ ಸವಾಲು ಇಲ್ಲ ಅಂತಾ ತೆಗೆದುಕೊಳ್ಳಲಾಯಿತು.

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

(ರಾಜೀವ ಗೋಳಸಾರ)
ಪ್ರ.ದಿ.&ನ್ಯಾದಂ., ಗೋಕಾಕ.